**ಸಾಕ್ಷಿಯನ್ನು ದಿಃ18.02.2020 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯವಿಚಾರಣೆಃ ಶ್ರೀಮತಿ ಆರ್.ಯು ವಕೀಲರಿಂದಃ**

2 ನೇ ಪ್ರತಿವಾದಿ ನನ್ನ ಹೆಂಡತಿ ದಾವಾ ಆಸ್ತಿಯನ್ನು ಖರೀದಿ ಮಾಡಿದ ಬಗ್ಗೆ ಖರೀದಿ ಕ್ರಯ ಪತ್ರದ ಅಸಲು ಪ್ರತಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಡಿ-7 ಎಂದು, ಸದರಿ ಕ್ರಯಪತ್ರವನ್ನು ತಪ್ಪಾಗಿ ಬರೆದ ಕಾರಣ ಅದನ್ನು ತಿದ್ದು ಪಡಿ ಮಾಡಿ ನೋಂದಾಯಿಸಿದ ಅಸಲು ತಿದ್ದು ಪಡಿಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಡಿ-7(ಎ)ಎಂದು, ಸದರಿ ದಾವಾಸ್ತಿಯು 2 ನೇ ಪ್ರತಿವಾದಿಯ ಹೆಸರಿನಲ್ಲಿದೆ ಎಂದು ತೋರಿಸಲು ಆಸ್ತಿ ತೆರಿಗೆ ರಿಜಿಸ್ಟರ್ ನ ದೃಢೀಕೃತ ನಕಲನ್ನು

ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಡಿ-8 ಎಂದು, ಸದರಿ ಆಸ್ತಿಯಲ್ಲಿ ಮನೆಯನ್ನು ಕಟ್ಟಲು ಪ್ರಾರಂಭಿಕ ಅನುಮತಿಯನ್ನು ಪಡೆದಿದ್ದು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಡಿ-9 ಎಂದು, ಅದೇ ರೀತಿ ಸ್ವತ್ತಿಗೆ ಅಭಿವೃದ್ಧಿ ಶುಲ್ಕವನ್ನು ಪಾವತಿಸಿದ ಬಗ್ಗೆ ರಸೀದಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಡಿ-10 ಎಂದು, ಸದರಿ ಸ್ವತ್ತಿನಲ್ಲಿ ಮನೆಯನ್ನು ಕಟ್ಟಲು ಪರವಾನಗಿಯನ್ನು ಪಡೆದಿದ್ದು ಸದರಿ ಪರವಾನಗಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಡಿ-11 ಎಂದು, ಸದರಿ ಸ್ವತ್ತಿಗೆ ಕಂದಾಯ ಕಟ್ಟಿದ ಬಗ್ಗೆ ಕಂದಾಯದ ರಸೀದಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಡಿ-12 ಎಂದು, ದಾವಾ ಆಸ್ತಿಗೆ 2013 ರಿಂದ 2015 ನೇ ಸಾಲಿನವರೆಗೆ ಸ್ವಯಂ ಘೋಷಿತ ತೆರಿಗೆಯನ್ನು ನಾನು ಘೋಸಿದ್ದು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಡಿ-13 ಎಂದು, ಹಾಗೂ ಅದಕ್ಕೆ ಸಂಬಂಧಿಸಿದಂತೆ ಹಣ ಕಟ್ಟಿದ ರಸೀದಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಡಿ-14 ಎಂದು, ಸದರಿ ಸ್ವತ್ತಿನಲ್ಲಿ ಮನೆಯನ್ನು ಕಟ್ಟಲು ನೀಲಿ ನಕ್ಷೆಯನ್ನು ತಯಾರಿಸಿದ್ದು ಅದನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಡಿ-15 ಎಂದು, ಸದರಿ ಸ್ವತ್ತಿನಲ್ಲಿ ಮನೆಯನ್ನು ಕಟ್ಟಲು ನಾನು ಬ್ಯಾಂಕಿನಲ್ಲಿ ಸಾಲವನ್ನು ಪಡೆದ ಬಗ್ಗೆ ಸಾಲದ ಅರ್ಜಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಡಿ-16 ಎಂದು ಗುರ್ತಿಸಲಾಯಿತು.

**ಪಾಟೀ ಸವಾಲುಃ ಶ್ರೀ ಸಿ.ಆರ್ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)

ಓ ಹೇ ಕೇ ಸರಿ ಇದೆ.

**(ಎ.ಸಿ. ದಯಾನಂದ ಮೂರ್ತಿ)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,**
**ಬಂಗಾರಪೇಟೆ**